**All India Radio: Bangalore**
**National Bulletin In Kannada**
**18.02.2025 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****************

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ಕತಾರ್ ಅಮೀರ್ ಶೇಖ್-ತಮಿಮ್-ಬಿನ್-ಹಮದ್-ಅಲ್-ಥಾನಿ ಮಾತುಕತೆ

೨. ಪ್ರಸಕ್ತ ೧೫ನೇ ಹಣಕಾಸು ಆಯೋಗದ ಅಡಿಯಲ್ಲಿ - ಪಿಎಂ ಆಶಾ ಯೋಜನೆ ಮುಂದುವರಿಸಲು ಕೇಂದ್ರ ಸರ್ಕಾರ ಅನುಮೋದನೆ

೩. ನೂತನ ಮುಖ್ಯ ಚುನಾವಣಾ ಆಯುಕ್ತರನ್ನಾಗಿ ಜ್ಞಾನೇಶ್ ಕುಮಾರ್ ನೇಮಕ

೪. ಮಹಿಳಾ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್; ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೮ ವಿಕೆಟ್ ಜಯ

*****************

ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ಕತಾರ್‌ನ ಅಮೀರ್ ಶೇಖ್-ತಮಿಮ್-ಬಿನ್-ಹಮದ್-ಅಲ್-ಥಾನಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ.

ಪ್ರಧಾನಿಯವರ ಆಹ್ವಾನದ ಮೇರೆಗೆ ಎರಡು ದಿನಗಳ ಭಾರತದ ಅಧಿಕೃತ ಭೇಟಿಗಾಗಿ ಕತಾರ್ ಅಮೀರ್ ನಿನ್ನೆ ನವದೆಹಲಿಗೆ ಆಗಮಿಸಿದರು. ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ವ್ಯಾಪಾರ ನಿಯೋಗ ಸೇರಿದಂತೆ ಉನ್ನತ ಮಟ್ಟದ ನಿಯೋಗ ಭಾರತಕ್ಕೆ ಭೇಟಿ ನೀಡಿದೆ. ದೆಹಲಿ ವಿಮಾನ ನಿಲ್ದಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಕತಾರ್ ಅಮೀರ್ ಅವರನ್ನು ಬರಮಾಡಿಕೊಂಡರು.

ಕತಾರ್ ಅಮಿರ್ ಅವರ ಭೇಟಿಯ ಕುರಿತು ಒಂದು ವರದಿ

ಭಾರತಕ್ಕೆ ಕತಾರ್ ಅಮೀರ್ ಶೇಖ್-ತಮಿಮ್-ಬಿನ್-ಹಮದ್-ಅಲ್-ಥಾನಿ ಅವರ ಎರಡನೇ ಭೇಟಿ ಇದಾಗಿದೆ. ಈ ಹಿಂದೆ ಅವರು ಮಾರ್ಚ್ ೨೦೧೫ ರಲ್ಲಿ ಭಾರತಕ್ಕೆ ಭೇಟಿ ನೀಡಿದ್ದರು.

ಶೇಖ್ ತಮೀಮ್ ಬಿನ್ ಹಮದ್ ಅಲ್-ಥಾನಿ ಅವರಿಗೆ ಇಂದು ರಾಷ್ಟ್ರಪತಿ ಭವನದ ಆವರಣದಲ್ಲಿ ಔಪಚಾರಿಕ ಸ್ವಾಗತ ನೀಡಲಾಗುವುದು. ಅಮೀರ್ ಅವರು ತಮ್ಮ ಭೇಟಿಯ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಈ ನಡುವೆ, ರಾಷ್ಟ್ರಪತಿಯವರು ಅಮೀರ್ ಅವರಿಗೆ ಗೌರವಾರ್ಥವಾಗಿ ಔತಣಕೂಟವನ್ನು ಸಹ ಆಯೋಜಿಸಲಿದ್ದಾರೆ. ಅಮೀರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳನ್ನು ಒಳಗೊಂಡ ವಿಸ್ತೃತ ಚರ್ಚೆ ನಡೆಸಲಿದ್ದಾರೆ.

ಭಾರತ ಮತ್ತು ಕತಾರ್ ಸ್ನೇಹ, ವಿಶ್ವಾಸ ಮತ್ತು ಪರಸ್ಪರ ಗೌರವದ ಆಳವಾದ ಐತಿಹಾಸಿಕ ಸಂಬಂಧಗಳನ್ನು ಹೊಂದಿವೆ. ಇತ್ತೀಚಿನ ವರ್ಷಗಳಲ್ಲಿ, ವ್ಯಾಪಾರ, ಹೂಡಿಕೆ, ಇಂಧನ, ತಂತ್ರಜ್ಞಾನ, ಸಂಸ್ಕೃತಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಎರಡೂ ದೇಶಗಳ ನಡುವಿನ ಸಂಬಂಧಗಳು ಬಲಗೊಳ್ಳುತ್ತಲೇ ಇವೆ.

ಅಲ್ಲಿ ವಾಸಿಸುವ ಭಾರತೀಯ ಸಮುದಾಯವು ಕತಾರ್‌ನ ಅತಿದೊಡ್ಡ ವಲಸಿಗ ಸಮುದಾಯವಾಗಿದೆ. ಕತಾರ್ ಅಮೀರ್ ಅವರ ಭಾರತ ಭೇಟಿಯು ಬೆಳೆಯುತ್ತಿರುವ ಬಹುಮುಖ ಪಾಲುದಾರಿಕೆಗೆ ಮತ್ತಷ್ಟು ವೇಗವನ್ನು ನೀಡಲಿದೆ ಎಂದು ಹೇಳಲಾಗುತ್ತಿದೆ.

*****************

೨೦೨೫-೨೬ ರವರೆಗಿನ ೧೫ನೇ ಹಣಕಾಸು ಆಯೋಗದ ಅಡಿಯಲ್ಲಿ ಸಮಗ್ರ ಪ್ರಧಾನ ಮಂತ್ರಿ ಅನ್ನದಾತ ಆಯ್ ಸಂರಕ್ಷಣ ಅಭಿಯಾನ - ಪಿಎಂ ಆಶಾ ಯೋಜನೆಯನ್ನು ಮುಂದುವರಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ.

ಈ ನಿರ್ಧಾರದೊಂದಿಗೆ, ೨೦೨೪-೨೫ ರ ಖರೀದಿ ವರ್ಷಕ್ಕೆ ರಾಜ್ಯದ ಉತ್ಪಾದನೆಯ ಶೇಕಡ ೧೦೦ ರಷ್ಟಿಗೆ ಸಮನಾದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ತೊಗರಿ, ಉದ್ದು ಮತ್ತು ಮಸೂರ್ ದ್ವಿದಳ ಧಾನ್ಯಗಳ ಖರೀದಿಗೆ ಸರ್ಕಾರ ಅನುಮತಿ ನೀಡಿದೆ. ಇದು ದ್ವಿದಳ ಧಾನ್ಯಗಳ ದೇಶೀಯ ಉತ್ಪಾದನೆಯಲ್ಲಿ ರೈತರ ಕೊಡುಗೆಯನ್ನು ಹೆಚ್ಚಿಸಲು ಮತ್ತು ಆಮದಿನ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕರ್ನಾಟಕ, ಆಂಧ್ರಪ್ರದೇಶ, ಛತ್ತೀಸ್‌ಗಢ, ಗುಜರಾತ್, ಹರಿಯಾಣ, ಮಧ್ಯಪ್ರದೇಶ, ಮಹಾರಾಷ್ಟ್ರ, ತೆಲಂಗಾಣ ಮತ್ತು ಉತ್ತರ ಪ್ರದೇಶಗಳಲ್ಲಿ ೨೦೨೪-೨೫ ರ ಮುಂಗಾರು ಋತುವಿನಲ್ಲಿ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಒಟ್ಟು ೧೩.೨೨ ಲಕ್ಷ ಮೆಟ್ರಿಕ್ ಟನ್ ತೊಗರಿ ಬೇಳೆಕಾಳುಗಳ ಖರೀದಿಗೆ ಅನುಮೋದನೆ ನೀಡಿದ್ದಾರೆ.

ಆಂಧ್ರಪ್ರದೇಶ, ಕರ್ನಾಟಕ, ಮಹಾರಾಷ್ಟ್ರ ಮತ್ತು ತೆಲಂಗಾಣದಲ್ಲಿ ಈಗಾಗಲೇ ಖರೀದಿ ಆರಂಭವಾಗಿದ್ದು, ಈ ರಾಜ್ಯಗಳಲ್ಲಿ ಈ ತಿಂಗಳ ೧೫ ರವರೆಗೆ ಒಟ್ಟು ೦.೧೫ ಲಕ್ಷ ಮೆಟ್ರಿಕ್ ಟನ್ ತೊಗರಿ ಬೇಳೆಯನ್ನು ಖರೀದಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಇದರಿಂದ ೧೨ ಸಾವಿರಕ್ಕೂ ಹೆಚ್ಚು ರೈತರಿಗೆ ಪ್ರಯೋಜನವಾಗಿದೆ.

****************

ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ನೂತನ ಮುಖ್ಯ ಚುನಾವಣಾ ಆಯುಕ್ತರನ್ನಾಗಿ ನೇಮಿಸಲಾಗಿದೆ.

ಹಾಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಅವರ ಅಧಿಕಾರಾವಧಿ ಇಂದು ಕೊನೆಗೊಳ್ಳುತ್ತಿದೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ೧೯೮೮ ರ ಬ್ಯಾಚ್‌ನ ಕೇರಳ ಕೇಡರ್‌ನ ಮಾಜಿ ಐಎಎಸ್ ಅಧಿಕಾರಿಯಾಗಿದ್ದಾರೆ. ಅವರು ಸಂಸದೀಯ ವ್ಯವಹಾರಗಳ ಸಚಿವಾಲಯದಲ್ಲಿ ಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸಿದ್ದಾರೆ.

ಇವರ ಜೊತೆಗೆ ಡಾ.ವಿವೇಕ್ ಜೋಶಿ ಅವರನ್ನು ಹೊಸ ಚುನಾವಣಾ ಆಯುಕ್ತರನ್ನಾಗಿ ನೇಮಿಸಲಾಗಿದೆ. ಅವರು ೧೯೮೯ ರ ಬ್ಯಾಚ್‌ನ ಹರಿಯಾಣ ಕೇಡರ್‌ನ ಐಎಎಸ್ ಅಧಿಕಾರಿಯಾಗಿದ್ದಾರೆ.

ಇಬ್ಬರೂ ಆಯುಕ್ತರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ನೇಮಿಸಿದ್ದಾರೆ.

*****************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದು ಜಮ್ಮು ಮತ್ತು ಕಾಶ್ಮೀರದಲ್ಲಿ ನೂತನ ಅಪರಾಧ ಕಾನೂನುಗಳ ಅನುಷ್ಠಾನದ ಸ್ಥಿತಿಯನ್ನು ಪರಿಶೀಲಿಸಲಿದ್ದಾರೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಮತ್ತು ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಉಪಸ್ಥಿತರಿರಲಿದ್ದಾರೆ.

ಮೂರು ಹೊಸ ಕ್ರಿಮಿನಲ್ ಕಾನೂನುಗಳಲ್ಲಿ ವಿವರಿಸಿರುವ ಪೊಲೀಸ್, ಜೈಲುಗಳು, ನ್ಯಾಯಾಲಯಗಳು, ಕಾನೂನು ಕ್ರಮ ಮತ್ತು ವಿಧಿವಿಜ್ಞಾನಕ್ಕೆ ಸಂಬಂಧಿಸಿದ ವಿವಿಧ ನಿಬಂಧನೆಗಳ ಪ್ರಸ್ತುತ ಸ್ಥಿತಿಯ ಮೇಲೆ ಈ ಸಭೆ ಕೇಂದ್ರೀಕರಿಸಲಿದೆ.

*****************

೨೬ ರಾಜ್ಯಗಳ ೧೫೨ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ರಾಷ್ಟ್ರೀಯ ಭೂ-ಪ್ರಾದೇಶಿಕ ಜ್ಞಾನ ಆಧಾರಿತ ನಗರ ಜನವಸತಿ ಸಮೀಕ್ಷೆ-'ನಕ್ಷಾ'ಗೆ ಇಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್ ಚಾಲನೆ ನೀಡಲಿದ್ದಾರೆ.

ಭೂ ಮಾಲೀಕತ್ವದ ನಿಖರ ಮತ್ತು ವಿಶ್ವಾಸಾರ್ಹ ದಾಖಲಾತಿಯನ್ನು ಖಚಿತಪಡಿಸಿಕೊಳ್ಳಲು ನಗರ ಪ್ರದೇಶಗಳಲ್ಲಿ ಭೂ ದಾಖಲೆಗಳನ್ನು ರಚಿಸುವುದು ಮತ್ತು ನವೀಕರಿಸುವುದು ಈ ಕಾರ್ಯಕ್ರಮದ ಗುರಿಯಾಗಿದೆ. ಈ ಉಪಕ್ರಮ ನಗರ ಯೋಜನೆಯನ್ನು ಹೆಚ್ಚಿಸುತ್ತದೆ ಮತ್ತು ಭೂ-ಸಂಬಂಧಿತ ವಿವಾದಗಳನ್ನು ಕಡಿಮೆ ಮಾಡುತ್ತದೆ ಎಂದು ಸಚಿವಾಲಯ ಹೇಳಿದೆ.

ಆಸ್ತಿ ದಾಖಲೆಗಳ ಮಾಹಿತಿ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯು ಪಾರದರ್ಶಕತೆ, ದಕ್ಷತೆಯನ್ನು ಹೆಚ್ಚಿಸಿ, ಸುಸ್ಥಿರ ಅಭಿವೃದ್ಧಿಯನ್ನು ಬೆಂಬಲಿಸುತ್ತದೆ.

*****************

ಗುಜರಾತ್‌ನ ವಡೋದರಾದ ಕೋಟಂಬಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂ ಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಡೆಲ್ಲಿ ಕ್ಯಾಪಿಟಲ್ಸ್ ತಂಡದ ವಿರುದ್ಧ ೮ ವಿಕೆಟ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ.

ಮೊದಲಿಗೆ ಟಾಸ್ ಸೋತು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್, ಆರ್‌ಸಿಬಿ ತಂಡದ ನಿಯಂತ್ರಿತ ಬೌಲಿಂಗ್ ನಡುವೆ ೧೯.೩ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೧೪೧ ರನ್ ಗಳಿಸಲಷ್ಟೇ ಶಕ್ತವಾಯಿತು. ಆಸಿಬಿ ಪರ ರೇಣುಕಾ ಸಿಂಗ್, ಜಾರ್ಜಿಯಾ ವೆರ್ಹಾಮ್ ತಲಾ ಮೂರು ವಿಕೆಟ್ ಪಡೆದರೆ, ಕಿಮ್ ಗಾರ್ಥ್ ೨ ವಿಕೆಟ್ ಪಡೆದರು.

೧೪೨ ರನ್‌ಗಳ ಗುರಿ ಬೆನ್ನತ್ತಿದ ಆರ್‌ಸಿಬಿ ತಂಡ ೧೬.೨ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೪೬ ರನ್ ಗಳಿಸಿ ಟೂರ್ನಿಯ ತನ್ನ ಸತತ ಎರಡನೇ ಪಂದ್ಯದಲ್ಲಿ ಗೆಲುವು ಸಾಧಿಸಿತು. ಆರ್‌ಸಿಬಿ ಪರ ನಾಯಕಿ ಸ್ಮೃತಿ ಮಂಧಾನಾ ೮೧, ಡ್ಯಾನಿ ವ್ಯಾಟ್-ಹೊಡ್ಜ್ ೪೨ ರನ್ ಗಳಿಸಿದರು.

ಇಂದು ಇದೇ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ೭.೩೦ ಕ್ಕೆ ಆರಂಭವಾಗಲಿದೆ.

*****************

ಮುಂಬರುವ ೨೦೨೫ರ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಟೂರ್ನಿಯಲ್ಲಿ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಭಾರತದ ಪುರುಷರ ತಂಡದ ನೂತನ ಜರ್ಸಿಯನ್ನು ಅನಾವರಣಗೊಳಿಸಿದೆ.

ಭುಜದ ಮೇಲೆ ತ್ರಿವರ್ಣದೊಂದಿಗೆ ಕಂಗೊಳಿಸುತ್ತಿರುವ ಜರ್ಸಿಯಲ್ಲಿ ತಂಡದ ನಾಯಕ ರೋಹಿತ್ ಶರ್ಮಾ ಅವರೊಂದಿಗೆ ಇತರ ಆಟಗಾರರು ಜರ್ಸಿ ಧರಿಸಿರುವ ಚಿತ್ರಗಳನ್ನು ಬಿಸಿಸಿಐ ಹಂಚಿಕೊಂಡಿದೆ.

ಇದೇ ೨೦ ರಂದು ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಭಾರತೀಯ ತಂಡ ಬಾಂಗ್ಲಾದೇಶದ ವಿರುದ್ಧ ತನ್ನ ಅಭಿಯಾನ ಆರಂಭಿಸಲಿದೆ.

****************

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ನಂತರ, ಭಾರತದ ಸ್ಟಾರ್ ಶೂಟರ್ ಮನು ಭಾಕರ್ ಅವರನ್ನು ಬಿಬಿಸಿ, ಇಂಡಿಯನ್ ಸ್ಪೋರ್ಟ್ಸ್‌ವುಮನ್ ಆಫ್ ದಿ ಇಯರ್ ಎಂದು ಹೆಸರಿಸಿದೆ.

ಮನುಭಾಕರ್ ಅವರೊಂದಿಗೆ, ಪ್ರಶಸ್ತಿಗೆ ನಾಮನಿರ್ದೇಶನಗೊಂಡ ಐದು ಜನರಲ್ಲಿ, ಗಾಲ್ಫ್ ಆಟಗಾರ್ತಿ ಅದಿತಿ ಅಶೋಕ್, ಪ್ಯಾರಾ ಶೂಟರ್ ಅವನಿ ಲೇಖರಾ, ಭಾರತದ ಮಹಿಳಾ ಕ್ರಿಕೆಟ್ ತಂಡದ ಉಪನಾಯಕಿ ಸ್ಮೃತಿ ಮಂಧಾನ ಮತ್ತು ಕುಸ್ತಿಪಟು ವಿನೇಶ್ ಫೋಗಟ್ ಅವರನ್ನು ಭಾರತೀಯ ಕ್ರೀಡೆಗೆ ನೀಡಿದ ಅಸಾಧಾರಣ ಕೊಡುಗೆಗಳಿಗಾಗಿ ಗುರುತಿಸಲಾಗಿದೆ.

ನಾಮನಿರ್ದೇಶಿತರನ್ನು ಕ್ರೀಡಾ ಪತ್ರಕರ್ತರು ಮತ್ತು ಬರಹಗಾರರನ್ನೊಳಗೊಂಡ ತೀರ್ಪುಗಾರರ ತಂಡ ಆಯ್ಕೆ ಮಾಡಿದೆ. ೨೨ ವರ್ಷದ ಮನು, ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಎರಡು ಕಂಚಿನ ಪದಕಗಳನ್ನು ಗೆದ್ದಿದ್ದಕ್ಕಾಗಿ ಪ್ರಶಸ್ತಿ ಪಡೆದಿದ್ದಾರೆ. ಸ್ವಾತಂತ್ರ್ಯದ ನಂತರ ಒಂದೇ ಕ್ರೀಡಾಕೂಟದಲ್ಲಿ ಹೆಚ್ಚು ಪದಕಗಳನ್ನು ಗೆದ್ದ ಮೊದಲ ಭಾರತೀಯ ಕ್ರೀಡಾಪಟು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಅವರು ೧೦ ಮೀಟರ್ ಏರ್ ಪಿಸ್ತೂಲ್ ವೈಯಕ್ತಿಕ ಸ್ಪರ್ಧೆಯಲ್ಲಿ ಮತ್ತು ೧೦ ಮೀಟರ್ ಏರ್ ಪಿಸ್ತೂಲ್ ಮಿಶ್ರ ತಂಡ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದಿದ್ದಾರೆ.

****************

ಚೆನ್ನೈನ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಇಂದು ಆರಂಭವಾಗಲಿರುವ ೨೩ನೇ ರಾಷ್ಟ್ರೀಯ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದಾದ್ಯಂತ ಸುಮಾರು ೧ ಸಾವಿರದ ೫೦೦ ಪ್ಯಾರಾ-ಅಥ್ಲೀಟ್‌ಗಳು ತಮ್ಮ ಕೌಶಲ್ಯವನ್ನು ಪ್ರದರ್ಶಿಸಲಿದ್ದಾರೆ.

ಈ ಐತಿಹಾಸಿಕ ಕ್ರೀಡಾಕೂಟದಲ್ಲಿ ೩೦ ತಂಡಗಳಿಂದ ೧೫೫ ಸ್ಪರ್ಧೆಗಳಲ್ಲಿ ಪ್ಯಾರಾ-ಅಥ್ಲೀಟ್‌ಗಳು ಸ್ಪರ್ಧಿಸಲಿದ್ದು, ಇದು ದೇಶದ ಅತಿದೊಡ್ಡ ಪ್ಯಾರಾ-ಅಥ್ಲೆಟಿಕ್ಸ್ ಕೂಟಗಳಲ್ಲಿ ಒಂದಾಗಿದೆ.

****************

ಹಿಮದ ಕೊರತೆಯ ನಡುವೆ ಖೇಲೊ ಇಂಡಿಯಾ ಚಳಿಗಾಲದ ಕ್ರೀಡಾಕೂಟ ೨೦೨೫ರ ಎರಡನೇ ಹಾಗೂ ಅಂತಿಮ ಚರಣವನ್ನು ಮುಂದೂಡಲಾಗಿದೆ.

ಇದೇ ೨೨ ರಂದು ಗುಲ್‌ಮಾರ್ಗ್, ಜಮ್ಮು-ಕಾಶ್ಮೀರದಲ್ಲಿ ಆರಂಭವಾಗಬೇಕಿದ್ದ ಎರಡನೇ ಚರಣದಲ್ಲಿ ಆಲ್‌ಪೈನ್ ಸ್ಕೀಯಿಂಗ್, ನಾರ್ಡಿಕ್ ಸ್ಕೀಯಿಂಗ್, ಸ್ನೊಬೋಡಿಂಗ್ ಹಾಗೂ ಸ್ಕೀಮೌಂಟೆನೇರಿಂಗ್ ಸ್ಪರ್ಧೆಗಳು ನಡೆಯಬೇಕಿದ್ದವು. ಪರಿಷ್ಕೃತ ವೇಳಾಪಟ್ಟಿಯನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು. ಕ್ರೀಡಾಕೂಟದ ಮೊದಲ ಚರಣವನ್ನು ಲಡಾಖ್‌ನಲ್ಲಿ ಜನವರಿ ೨೩ ರಿಂದ ೨೭ರವರೆಗೆ ಆಯೋಜಿಸಲಾಗಿತ್ತು.

****************